# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಯು.ಬಿ. ವೆಂಕಟೇಶ್<br>(ನಾಮ ನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 600 |
| ಉತ್ತರಿಸಬೇಕಾದ ದಿನಾಂಕ: | 19-09-2022 |
| ಉತ್ತರಿಸುವ ಸಚಿವರು: | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಯುದ್ಧ ಪೀಡಿತವಾಗಿದ್ದ ಉಕ್ರೇನ್‌ನಿಂದ ವೈದ್ಯಕೀಯ ವಿದ್ಯಾಭ್ಯಾಸ ಮೊಟಕುಗೊಳಿಸಿ ರಾಜ್ಯಕ್ಕೆ ಆಗಮಿಸಿದ್ದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಯುದ್ಧ ಪೀಡಿತವಾಗಿದ್ದ ಉಕ್ರೇನ್‌ನಿಂದ ವೈದ್ಯಕೀಯ ವಿದ್ಯಾಭ್ಯಾಸ ಮೊಟಕುಗೊಳಿಸಿ ಅಂದಾಜು 700 ವಿದ್ಯಾರ್ಥಿಗಳು ಕರ್ನಾಟಕ ರಾಜ್ಯಕ್ಕೆ ಮರಳಿ ಬಂದಿರುತ್ತಾರೆ. |
| ಆ) | ಎಷ್ಟು ಜನ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮುಂದುವರೆಸಲು ಯಾವ ಯಾವ ವಿಶ್ವವಿದ್ಯಾಲಯಗಳು ಅನುಕೂಲ ಕಲ್ಪಿಸಿವೆ; | ವೈದ್ಯಕೀಯ ಶಿಕ್ಷಣವನ್ನು ಮೊಟಕುಗೊಳಿಸಿ ರಾಜ್ಯಕ್ಕೆ ಹಿಂದಿರುಗಿರುವ ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಸನ್ಮಾನ್ಯ ಮುಖ್ಯಮಂತ್ರಿಯವರೊಂದಿಗೆ ಮಾನ್ಯ ಆರೋಗ್ಯ ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಚರ್ಚಿಸಿರುತ್ತಾರೆ. ಉಕ್ರೇನ್ ಯುದ್ಧದ ಪರಿಣಾಮವಾಗಿ ವ್ಯಾಸಂಗವನ್ನು ಮೊಟಕುಗೊಳಿಸಿ ಸ್ವದೇಶಕ್ಕೆ ವಾಪಸ್ಸಾದ ವೈದ್ಯಕೀಯ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಶೀಲಿಸಲು ಹಾಗೂ ಸಮಸ್ಯೆಗಳಿಗೆ ಸೂಕ್ತ ಪರಿಹಾರವನ್ನು ನೀಡುವ ನಿಟ್ಟಿನಲ್ಲಿ ಸಲಹೆಗಳನ್ನು ನೀಡಲು ಮಾನ್ಯ ಉಪ ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು.<br>ಆದರೆ ವೈದ್ಯಕೀಯ ಶಿಕ್ಷಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ವೈದ್ಯಕೀಯ ಆಯೋಗ(NMC) ನಮ್ಮ ರಾಷ್ಟ್ರದಲ್ಲಿ ವೈದ್ಯಕೀಯ ಶಿಕ್ಷಣ ನೀತಿಯನ್ನು ರೂಪಿಸುವ ಅಗ್ರಮಾನ್ಯ ಶಾಸನಬದ್ಧ ಸಂಸ್ಥೆಯಾಗಿದೆ. ಉಕ್ರೇನ್‌ನಿಂದ ವೈದ್ಯಕೀಯ ವಿದ್ಯಾಭ್ಯಾಸ ಮೊಟಕುಗೊಳಿಸಿ ರಾಜ್ಯಕ್ಕೆ ಹಿಂತಿರುಗಿರುವ ಪ್ರಕರಣಗಳು ಕರ್ನಾಟಕ ರಾಜ್ಯದಲ್ಲಿ ಮಾತ್ರವಲ್ಲದೇ, ಭಾರತದ ಇತರ ರಾಜ್ಯಗಳ |
| ಇ) | ಶುಲ್ಕ ರಿಯಾಯಿತಿ ಹಾಗೂ ಇತರ ಅನುಕೂಲಗಳನ್ನು ಒದಗಿಸಲಾಗಿದೆಯೇ? | |



Generated from eOffice by DR K SUDHAKAR, MED-MIN(SK), MINISTER, MEDICAL EDUCATION SEC on 19/09/2022 01:07 PM

896999

| | | |
|---|---|---|
| | | ವಿದ್ಯಾರ್ಥಿಗಳನ್ನು ಸಹ ಒಳಗೊಂಡಿರುವ ಕಾರಣ ಸದರಿ ಸಂಸ್ಥೆಯು ಈ ವಿಷಯದಲ್ಲಿ ಏಕರೂಪದ ನೀತಿಯನ್ನು ಕೈಗೊಳ್ಳಬೇಕಾಗಿರುತ್ತದೆ. ಇದೊಂದು ವಿಶೇಷ ಸಂದರ್ಭವಾಗಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅವಶ್ಯಕ ಕ್ರಮ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದವನ್ನು ನಡೆಸಿ ಹಾಗೂ ಕ್ಷೇತ್ರ ಪರಿಣಿತರೊಂದಿಗೆ ಚರ್ಚಿಸಿ ರಾಷ್ಟ್ರೀಯ ವೈದ್ಯಕೀಯ ಆಯೋಗವು ನೀಡುವ ಸೂಚನೆಗಳನ್ನು ನಿರೀಕ್ಷಿಸಲಾಗುತ್ತಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗವು ನೀಡುವ ಸೂಚನೆಗಳನುಸಾರ ಅಗತ್ಯ ಕ್ರಮವಹಿಸಲಾಗುವುದು. |

**ಸಂಖ್ಯೆ:ಎಂಇಡಿ 116 ಆರ್‌ಜಿಯು 2022**

(ಡಾ.ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು